# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 1010
ಸದಸ್ಯರ ಹೆಸರು : ಶ್ರೀ ಸಲೀಂ ಅಹಮದ್
ಉತ್ತರಿಸುವ ದಿನಾಂಕ : 24-02-2023
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದಲ್ಲಿನ ಅಲೆಮಾರಿ ಸಮುದಾಯಗಳ ಜನರ ವಸತಿ ಯೋಜನೆಗೆ ಮೀಸಲಿಟ್ಟ ಅನುದಾನದ ಮೊತ್ತವೆಷ್ಟು; ಈ ಅನುದಾನದಲ್ಲಿ ವಿನಿಯೋಗಿಸಿದ ಮೊತ್ತವೆಷ್ಟು; | ಅಲೆಮಾರಿ ಸಮುದಾಯಗಳ ವಸತಿ ರಹಿತರಿಗೆ ನಿಗಮದಿಂದ ಅನುಷ್ಠಾನಗೊಳಿಸಲಾಗುತ್ತಿರುವ ಡಾ.ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆಯಡಿ ವಸತಿ ಸೌಕರ್ಯವನ್ನು ಕಲ್ಪಿಸಲಾಗುತ್ತಿದೆ. ಈ ಯೋಜನೆಗಳಡಿ ಸರ್ಕಾರದಿಂದ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನದಿಂದ ಫಲಾನುಭವಿಗಳಿಗೆ ಜಿ.ಪಿ.ಎಸ್ ಆಧಾರಿತ ಭೌತಿಕ ಪ್ರಗತಿಗನುಗುಣವಾಗಿ ಆಧಾರ್ ಜೋಡಣೆಗೊಂಡ ಅರ್ಹ ಫಲಾನುಭವಿಗಳಿಗೆ ಅನುದಾನ ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತಿದೆ.<br><br>ಅದರಂತೆ, ಕಳೆದ ಮೂರು ವರ್ಷಗಳಿಂದ ಅಂದರೆ ಆರ್ಥಿಕ ವರ್ಷ 2019-20 ರಿಂದ 2022-23ನೇ ಸಾಲಿನ ಜನವರಿ-2023 ರ ಅಂತ್ಯದವರೆಗೆ ಹಿಂದಿನ ಶ್ರೇಣಿಗಳಲ್ಲಿ ಪ್ರಗತಿಯಲ್ಲಿರುವ ಮನೆಗಳನ್ನು ಒಳಗೊಂಡಂತೆ ಪರಿಶಿಷ್ಟ ಜಾತಿ (ಎಸ್.ಸಿ) ಮತ್ತು ಪರಿಶಿಷ್ಟ ಪಂಗಡದಲ್ಲಿನ (ಎಸ್.ಟಿ) ಅಲೆಮಾರಿ ಸಮುದಾಯಗಳ ಡಾ.ಬಿ.ಆರ್.ಅಂಬೇಡ್ಕರ್ ನಿವಾಸ್ ವಸತಿ ಯೋಜನೆಗೆ ರೂ. 556.84 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. |
| ಆ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದಲ್ಲಿನ ಅಲೆಮಾರಿ ಸಮುದಾಯಗಳ ವಸತಿ ಯೋಜನೆಗೆ ಮೀಸಲಿಟ್ಟ ಹಣವನ್ನು ಇತರೆ ವಸತಿ ಯೋಜನೆಗಳಿಗೆ ವರ್ಗಾವಣೆಯನ್ನು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಹಿಂದೆ ಸದರಿ ಯೋಜನೆಗೆ ಮೀಸಲಿಟ್ಟ ಅನುದಾನವನ್ನು ವಾಪಸ್ ಪಡೆದಿರುವುದು ನಿಜವೇ; | 2022-23ನೇ ಸಾಲಿನಲ್ಲಿ ಕರ್ನಾಟಕ ಪ.ಜಾತಿ/ ಪ.ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ವಸತಿ ಯೋಜನೆಯಡಿ ರೂ. 300.00 ಕೋಟಿಗಳನ್ನು ಹಂಚಿಕೆ ಮಾಡಲಾಗಿದ್ದು, ಆರ್ಥಿಕ ಇಲಾಖೆಯು ಸದರಿ ಅನುದಾನವನ್ನು ರಾಜೀವ್ ಗಾಂಧಿ ವಸತಿ ನಿಗಮದ ಯೋಜನೆಯಾದ ಡಾ. ಬಿ. ಆರ್ ಅಂಬೇಡ್ಕರ್ ವಸತಿ ಯೋಜನೆಗೆ ಈಗಾಗಲೇ ಅನುಮೋದಿಸಿ ಬಾಕಿ ಇರುವ ಕಂತುಗಳಿಗೆ ಉಪಯೋಗಿಸುವುದು ಹಾಗೂ ಸಮಾಜ ಕಲ್ಯಾಣ ಇಲಾಖೆಯು ಪ್ರಸ್ತಾಪಿಸಿದ ಫಲಾನುಭವಿಗಳನ್ನು ವಸತಿ ಯೋಜನೆಯಡಿ ಹೊಸದಾಗಿ ಮಂಜೂರು ಮಾಡಿದ 5 ಲಕ್ಷ ಗುರಿಯಲ್ಲಿ ಪರಿಗಣಿಸುವುದು ಎಂದು ತಿಳಿಸಿಲಾಗಿದೆ.<br><br>ಪ.ಜಾತಿ/ಪ.ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ವಸತಿ ಯೋಜನೆಯನ್ನು ರಾಜೀವ್ ಗಾಂಧಿ ವಸತಿ ನಿಗಮದಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, 2022-23ನೇ ಸಾಲಿನಲ್ಲಿ ಪ.ಜಾತಿ / ಪ.ಪಂಗಡ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗವರಿಗೆ ವಸತಿಗಾಗಿ 15000 ಮನೆಗಳ ಗುರಿಗಳನ್ನು ನಿಗಧಿಪಡಿಸುವಂತೆ ಪ್ರಸ್ತಾವನೆಯನ್ನು ರಾಜೀವ್ ಗಾಂಧಿ ವಸತಿ ನಿಗಮಕ್ಕೆ ಸಲ್ಲಿಸಲಾಗಿದೆ. |

| | | |
|---|---|---|
| ಇ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದಲ್ಲಿನ ಅಲೆಮಾರಿ ಸಮುದಾಯಗಳ ವಸತಿ ಯೋಜನೆಗಳಿಗೆ ಅರ್ಜಿಯನ್ನು ಸಲ್ಲಿಸುವಾಗ ಅನೇಕ ದಾಖಲಾತಿಗಳನ್ನು ಸಲ್ಲಿಸಲು ಈ ಸಮುದಾಯದವರು ಸಾಧ್ಯವಾಗುತ್ತಿಲ್ಲದ ಕಾರಣದಿಂದ ಈ ವಿಧಾನವನ್ನು ಸರಳೀಕರಿಸಲು ಸರ್ಕಾರದ ಕ್ರಮವೇನು; | ಕರ್ನಾಟಕ ಪ.ಜಾತಿ/ಪ.ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ವಸತಿ ಯೋಜನೆಯು ರಾಜೀವ್ ಗಾಂಧಿ ವಸತಿ ನಿಗಮದಿಂದ ಸಮಗ್ರ ಮನೆ ಮಾರ್ಗಸೂಚಿಗಳ ಪ್ರಕಾರ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ದಾಖಲಾತಿಗಳ ಸರಳೀಕರಣದ ಕುರಿತು ಈಗಾಲೇ ಪ್ರಸ್ತಾವನೆಯನ್ನು ರಾಜೀವ್ ಗಾಂಧಿ ವಸತಿ ನಿಗಮಕ್ಕೆ ನಿರ್ದೇಶನ ನೀಡಲಾಗಿದೆ. |
| ಈ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದಲ್ಲಿನ ಅಲೆಮಾರಿ ಸಮುದಾಯಗಳ ಅಭಿವೃದ್ಧಿಗಾಗಿ ಮೀಸಲಿಟ್ಟ ಅನುದಾನವನ್ನು ವಾಪಸ್ ತೆಗೆದುಕೊಂಡಿರುವುದನ್ನು ಪುನ: ಹಿಂಪಡೆದು ಈ ಸಮುದಾಯದ ಅಭಿವೃದ್ಧಿಗೆ ಬಳಸಿಕೊಳ್ಳಲು ಸರ್ಕಾರದ ಕ್ರಮವೇನು? | 2022-23ನೇ ಸಾಲಿನಲ್ಲಿ ಕರ್ನಾಟಕ ಪ.ಜಾತಿ / ಪ.ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ವಸತಿ ಯೋಜನೆಯಡಿ ರೂ.300.00 ಕೋಟಿಗಳನ್ನು ಹಂಚಿಕೆ ಮಾಡಲಾಗಿದ್ದು, ಆರ್ಥಿಕ ಇಲಾಖೆಯು ಸದರಿ ಅನುದಾನವನ್ನು ರಾಜೀವ್ ಗಾಂಧಿ ವಸತಿ ನಿಗಮದ ಯೋಜನೆಯಾದ ಡಾ. ಬಿ.ಆರ್ ಅಂಬೇಡ್ಕರ್ ವಸತಿ ಯೋಜನೆಗೆ ಈಗಾಗಲೇ ಅನುಮೋದಿಸಿ ಬಾಕಿ ಇರುವ ಕಂತುಗಳಿಗೆ ಉಪಯೋಗಿಸುವುದು ಹಾಗೂ ಸಮಾಜ ಕಲ್ಯಾಣ ಇಲಾಖೆಯು ಪ್ರಸ್ತಾಪಿಸಿದ ಫಲಾನುಭವಿಗಳನ್ನು ವಸತಿ ಯೋಜನೆಯಡಿ ಹೊಸದಾಗಿ ಮಂಜೂರು ಮಾಡಿದ 5 ಲಕ್ಷ ಗುರಿಯಲ್ಲಿ ಪರಿಗಣಿಸುವುದು ಎಂದು ತಿಳಿಸಿಲಾಗಿದೆ.<br><br>ಪ.ಜಾತಿ / ಪ.ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ವಸತಿ ಯೋಜನೆಯನ್ನು ರಾಜೀವ್ ಗಾಂಧಿ ವಸತಿ ನಿಗಮದಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, 2022-23ನೇ ಸಾಲಿನಲ್ಲಿ ಪ.ಜಾತಿ / ಪ.ಪಂಗಡ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗವರಿಗೆ ವಸತಿಗಾಗಿ 15000 ಮನೆಗಳ ಗುರಿಗಳನ್ನು ನಿಗಧಿಪಡಿಸುವಂತೆ ಪ್ರಸ್ತಾವನೆಯನ್ನು ರಾಜೀವ್ ಗಾಂಧಿ ವಸತಿ ನಿಗಮಕ್ಕೆ ಸಲ್ಲಿಸಲಾಗಿದೆ. |

**SWD/81/SDC/2023**

**(ಕೋಟ ಶ್ರೀನಿವಾಸ ಪೂಜಾರಿ)**
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.